# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 862(990)
2. ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು)
3. ಉತ್ತರಿಸುವ ಸಚಿವರು : ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು.
4. ಉತ್ತರಿಸುವ ದಿನಾಂಕ : 14.12.2023.

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ ಕಾನೂನು ಪದವಿ ಶಿಕ್ಷಣಕ್ಕೆ ಬೇಡಿಕೆ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಬಂದಿದೆ.</td></tr>
<tr><td>ಆ)</td><td>ಸರ್ಕಾರಿ / ಅನುದಾನಿತ ಹಾಗೂ ಅನುದಾನ ರಹಿತ ಕಾನೂನು ಕಾಲೇಜುಗಳ ಸಂಖ್ಯೆ ಎಷ್ಟು; (ಪ್ರತ್ಯೇಕವಾಗಿ ವಿವರಗಳೊಂದಿಗೆ ಮಾಹಿತಿ ನೀಡುವುದು).</td><td>ಸರ್ಕಾರಿ ಕಾನೂನು ಕಾಲೇಜುಗಳ ಸಂಖ್ಯೆ: 07<br><br>ಅನುದಾನಿತ ಕಾನೂನು ಕಾಲೇಜುಗಳ ಸಂಖ್ಯೆ: 27<br><br>ಅನುದಾನರಹಿತ ಕಾನೂನು ಕಾಲೇಜುಗಳ ಸಂಖ್ಯೆ: 83</td></tr>
<tr><td>ಇ)</td><td>ಸರ್ಕಾರಿ / ಅನುದಾನಿತ ಕಾಲೇಜುಗಳಲ್ಲಿ ಮಂಜೂರಾಗಿರುವ ಹಾಗೂ ನೇಮಕಗೊಂಡಿರುವ ಬೋಧಕ / ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು; (ಪ್ರತ್ಯೇಕವಾಗಿ ವಿವರ ನೀಡುವುದು)</td><td>ಸರ್ಕಾರಿ ಹಾಗೂ ಅನುದಾನಿತ ಕಾನೂನು ಕಾಲೇಜುಗಳಲ್ಲಿ ಮಂಜೂರಾಗಿರುವ ಮತ್ತು ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ ಹಾಗೂ ಬೋಧಕೇತರ ಸಂಖ್ಯಾ ಮಾಹಿತಿ ಈ ಕೆಳಕಂಡಂತಿರುತ್ತದೆ;
<table>
<tr><th>ಕ್ರ. ಸಂ.</th><th>ವೃಂದ</th><th>ಮಂಜೂರಾಗಿರುವ ಹುದ್ದೆಗಳ ಸಂಖ್ಯೆ</th><th>ಕರ್ತವ್ಯ ನಿರ್ವಹಿಸುತ್ತಿರುವವರ ಸಂಖ್ಯೆ:</th></tr>
<tr><td>1.</td><td>ಬೋಧಕರು</td><td>75</td><td>38</td></tr>
<tr><td>2.</td><td>ಬೋಧಕೇತರರು</td><td>49</td><td>13</td></tr>
</table>
ಅನುದಾನಿತ ಕಾಲೇಜುಗಳು
<table>
<tr><th>ಕ್ರ. ಸಂ.</th><th>ವೃಂದ</th><th>ಮಂಜೂರಾಗಿರುವ ಹುದ್ದೆಗಳ ಸಂಖ್ಯೆ</th><th>ಕರ್ತವ್ಯ ನಿರ್ವಹಿಸುತ್ತಿರುವವರ ಸಂಖ್ಯೆ:</th></tr>
<tr><td>1.</td><td>ಬೋಧಕರು</td><td>265</td><td>156</td></tr>
<tr><td>2.</td><td>ಬೋಧಕೇತರರು</td><td>390</td><td>202</td></tr>
</table></td></tr>
</table>

| | | |
|---|---|---|
| ಈ) | ಸರ್ಕಾರಿ / ಅನುದಾನಿತ ಕಾಲೇಜುಗಳಲ್ಲಿ ಖಾಲಿ ಹುದ್ದೆಗೆ ಎದುರಾಗಿ ಎಷ್ಟು ಮಂದಿ ಅತಿಥಿ ಉಪನ್ಯಾಸಕರು ಕಾರ್ಯ ನಿರ್ವಹಿಸುತ್ತಿದ್ದಾರೆ; (ಪ್ರತ್ಯೇಕವಾಗಿ ವಿವರ ನೀಡುವುದು); | ಸರ್ಕಾರಿ ಕಾನೂನು ಕಾಲೇಜುಗಳಲ್ಲಿ ಖಾಲಿ ಹುದ್ದೆಗಳ ಎದುರಾಗಿ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳುವುದಿಲ್ಲ. ಬದಲಾಗಿ ಸರ್ಕಾರಿ ಕಾಲೇಜುಗಳಲ್ಲಿ ಲಭ್ಯವಾಗುವ ಕಾರ್ಯಭಾರವನ್ನು ಮೊದಲು ಖಾಯಂ ಉಪನ್ಯಾಸಕರಿಗೆ ಹಂಚಿಕೆಯಾಗಿ ಉಳಿಕೆಯಾಗುವ ಹೆಚ್ಚುವರಿ ಕಾರ್ಯಭಾರವನ್ನು ನಿರ್ವಹಿಸಲು ಮಾತ್ರ ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 88 ಡಿಸಿಇ 2003, ದಿನಾಂಕ: 18.12.2003 ರನ್ವಯ ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಳ್ಳಲಾಗುತ್ತಿದೆ.<br><br>ಪ್ರಸ್ತುತ ಸರ್ಕಾರಿ ಕಾನೂನು ಕಾಲೇಜುಗಳಲ್ಲಿ ಒಟ್ಟು 30 ಅತಿಥಿ ಉಪನ್ಯಾಸಕರು ಕಾರ್ಯನಿರ್ವಹಿಸುತ್ತಿದ್ದಾರೆ. ವಿವರ ಕೆಳಗಿನಂತಿದೆ; |

| ಕ್ರ. ಸಂಖ್ಯೆ | ಕಾಲೇಜುಗಳ ಹೆಸರು | ಅತಿಥಿ ಉಪನ್ಯಾಸಕರ ಸಂಖ್ಯೆ |
|---|---|---|
| 1 | ಸರ್ಕಾರಿ ಕಾನೂನು ಕಾಲೇಜು, ರಾಮನಗರ. | 4 |
| 2 | ಸರ್ಕಾರಿ ಕಾನೂನು ಕಾಲೇಜು, ಕೋಲಾರ. | 2 |
| 3 | ಸರ್ಕಾರಿ ಕಾನೂನು ಕಾಲೇಜು, ಹಾಸನ. | 4 |
| 4 | ಸರ್ಕಾರಿ ಕಾನೂನು ಕಾಲೇಜು, ಹೊಳೆನರಸೀಪುರ. | 14 |
| 5 | ವಿಜ್ಞಾನೇಶ್ವರ ಸರ್ಕಾರಿ ಕಾನೂನು ಕಾಲೇಜು, ಕಲಬುರಗಿ | 6 |
| 6 | ಸರ್ಕಾರಿ ಕಾನೂನು ಕಾಲೇಜು, ಚಾಮರಾಜನಗರ | 0 |
| 7 | ಸರ್ಕಾರಿ ಕಾನೂನು ಕಾಲೇಜು, ಹಾವೇರಿ | 0 |

| | | |
|---|---|---|
| | | ಅನುದಾನಿತ ಕಾನೂನು ಕಾಲೇಜುಗಳಲ್ಲಿ ಇಲಾಖಾವತಿಯಿಂದ ಅತಿಥಿ ಉಪನ್ಯಾಸಕರ ನೇಮಕಾತಿಯನ್ನು ಮಾಡುವುದಿಲ್ಲ. |
| ಉ) | ಖಾಲಿ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲಾಗುವುದು; | **ಸರ್ಕಾರಿ ಕಾನೂನು ಕಾಲೇಜುಗಳಿಗೆ ಸಂಬಂಧಿಸಿದಂತೆ:**<br><br>**<u>ಪ್ರಾಂಶುಪಾಲರ ಹುದ್ದೆ</u>**<br><br>ಕಾಲೇಜು ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಪ್ರಾಂಶುಪಾಲರ ಹುದ್ದೆಗಳನ್ನು ಯು.ಜಿ.ಸಿ ಮಾನದಂಡಗಳನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಬೇಕಾಗಿರುತ್ತದೆ.<br><br>ಅದರಂತೆ ಸರ್ಕಾರಿ ಕಾನೂನು ಕಾಲೇಜುಗಳಲ್ಲಿ ಖಾಲಿ ಇರುವ 06 |

ಅದರಂತೆ ಸರ್ಕಾರಿ ಕಾನೂನು ಕಾಲೇಜುಗಳಲ್ಲಿ ಖಾಲಿ ಇರುವ 06 ಪ್ರಾಂಶುಪಾಲರ ಹುದ್ದೆಗಳನ್ನು ಭರ್ತಿ ಮಾಡಲು ವಿಶೇಷ ನೇಮಕಾತಿ ನಿಯಮಾವಳಿಗಳನ್ನು ರೂಪಿಸಿ, ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/121/ಡಿಸಿಇ/2018, ದಿ:09.09.2020 ರಲ್ಲಿ ಹೊರಡಿಸಲಾಗಿದೆ.

ಸದರಿ ವಿಶೇಷ ನೇಮಕಾತಿ ನಿಯಮಗಳನ್ವಯ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಿ, 06 ಪ್ರಾಂಶುಪಾಲರ ಹುದ್ದೆಗಳಿಗೆ ನಿಯಮಾನುಸಾರ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ, ಅಂತಿಮ ಆಯ್ಕೆ ಪಟ್ಟಿಯನ್ನು ಸಲ್ಲಿಸಲು ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/121/ ಡಿಸಿಇ/2018, ದಿ:21.03.2022 ರಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ವಹಿಸಲಾಗಿದೆ.

ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಅರ್ಹ ಅಭ್ಯರ್ಥಿಗಳ ಅಂತಿಮ ಆಯ್ಕೆಪಟ್ಟಿಯನ್ನು ಸರ್ಕಾರ/ಇಲಾಖೆಗೆ ಸಲ್ಲಿಸಿದ ನಂತರ ಖಾಲಿ ಇರುವ ಪ್ರಾಂಶುಪಾಲರ ಹುದ್ದೆಗಳನ್ನು ಭರ್ತಿ ಮಾಡಲು ನಿಯಮಾನುಸಾರ ಕ್ರಮವಹಿಸಲಾಗುವುದು.

ಸದರಿ ವಿಶೇಷ ನೇಮಕಾತಿ ನಿಯಮಗಳನ್ವಯ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಭರ್ತಿ ಮಾಡಲು ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/257/ಡಿಸಿಇ/ 2019, ದಿನಾಂಕ:26.08.2021 ಅನ್ನು ಹೊರಡಿಸಲಾಗಿದೆ.

ಅದರಂತೆ, ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ದಿನಾಂಕ:30.09.2021 ರಂದು ಈಗಾಗಲೇ ಅಧಿಸೂಚನೆ ಹೊರಡಿಸಿದ್ದು, ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಸಹ ನಡೆಸಿರುತ್ತದೆ. ಆಯ್ಕೆಯಾದ ಅರ್ಹ ಅಭ್ಯರ್ಥಿಗಳ ಅಂತಿಮ ಆಯ್ಕೆಪಟ್ಟಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ಹುದ್ದೆ ಭರ್ತಿಗೆ ಕ್ರಮವಹಿಸಲಾಗುವುದು.

**.ಖಾಸಗಿ ಅನುದಾನಿತ ಕಾನೂನು ಕಾಲೇಜುಗಳಿಗೆ ಸಂಬಂಧಿಸಿದಂತೆ:-**

ಸರ್ಕಾರದ ಆದೇಶ ಸಂಖ್ಯೆ: ಲಾ/77/ಕೆಎಲ್ಎಂ/2018, ದಿನಾಂಕ: 12.06.2019ರಲ್ಲಿ ಒಂದು ಬಾರಿಯ ಕ್ರಮವಾಗಿ ರಾಜ್ಯದಲ್ಲಿನ ಖಾಸಗಿ ಅನುದಾನಿತ ಕಾನೂನು ಕಾಲೇಜುಗಳಲ್ಲಿನ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ ನೇಮಕಾತಿಗಾಗಿ ಅಭ್ಯರ್ಥಿಗಳ ಗರಿಷ್ಠ ವಯೋಮಿತಿಯನ್ನು ಹೆಚ್ಚಳ ಮಾಡಲಾಗಿದೆ. ಆದರೆ, ಸದರಿ ಆದೇಶದಲ್ಲಿ ಖಾಲಿ ಇರುವ ಬೋಧಕರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಅನುಮತಿ ನೀಡಿಲ್ಲದ ಕಾರಣ, ಕಾಲೇಜು ಶಿಕ್ಷಣ ಇಲಾಖೆಯ ಪತ್ರ ಸಂಖ್ಯೆ: ಕಾಶಿಇ/188/ಕಾಕಾ/ವ.ಮಿ.ಸ/2018-19/ನೇವಿ-2, ದಿನಾಂಕ: 10.02.2020ರಲ್ಲಿ ಬೋಧಕರ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಅನುಮತಿ ನೀಡುವಂತೆ ಕೋರಿದ್ದು, ಇದರಂತೆ, ಆಯುಕ್ತಾಲಯವು ಸಲ್ಲಿಸಿರುವ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯು ಮಾಹಿತಿ / ದಾಖಲೆಗಳನ್ನು ಒದಗಿಸುವಂತೆ ಕೋರಿದ್ದು, ಈ ಬಗ್ಗೆ ಆಯುಕ್ತಾಲಯದಿಂದ ವರದಿ ಸ್ವೀಕೃತಗೊಂಡ ನಂತರ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಿ ಕ್ರಮಕೈಗೊಳ್ಳಲಾಗುವುದು.

ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/551/ಯುಪಿಸಿ/2003, ದಿ:07.08.2003 ರಲ್ಲಿ ಸರ್ಕಾರವು ಹೊರಡಿಸಿರುವ ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಕಾಲೇಜು ಶಿಕ್ಷಣ) ನಿಯಮ-2003ರ ನಿಯಮ-8 (2) ರನ್ವಯ ದಿನಾಂಕ:01.03.2001 ರಂದು ಹಾಗೂ ತದನಂತರ ತೆರವಾಗುವ ಎಲ್ಲಾ ಬೋಧಕೇತರ ಹುದ್ದೆಗಳು ಶಾಶ್ವತ ಅನುದಾನರಹಿತ ಹುದ್ದೆಗಳೆಂದು ಪರಿಗಣಿಸಲ್ಪಟ್ಟಿರುತ್ತವೆ. ಆದ್ದರಿಂದ ಖಾಸಗಿ ಅನುದಾನಿತ ಕಾನೂನು ಕಾಲೇಜುಗಳಲ್ಲಿನ ಬೋಧಕೇತರ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಪ್ರಸ್ತುತ ಅವಕಾಶವಿರುವುದಿಲ್ಲ.

ಆದರೆ, ಸರ್ಕಾರದ ಸುತ್ತೋಲೆ ಸಂಖ್ಯೆ:ಆಇ/01/ಬಿಇಎಂ/ 2012, ದಿನಾಂಕ:14.06.2012 ರಲ್ಲಿ ಈ ಹಿಂದೆ ಗುರುತಿಸಲ್ಪಟ್ಟ ಬೋಧಕೇತರ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಅವಕಾಶವಿರುತ್ತದೆ. ಅದರಂತೆ ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ಆದರೆ, ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಆಇ/157/ವೆಚ್ಚ-8/2020, ದಿನಾಂಕ: 10.06.2020 ಸುತ್ತೋಲೆಯಲ್ಲಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಖಾಲಿ ಉಂಟಾಗುವ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಹೊಸದಾಗಿ ಸಹಮತಿ ನೀಡುವಂತಿಲ್ಲವೆಂದು ನಿರ್ಬಂದ ವಿಧಿಸಿತ್ತು. ನಂತರ ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ:ಆಇ 507/ವೆಚ್ಚ-8/2022, ದಿನಾಂಕ:23.06.2022ರಲ್ಲಿ ವೇತನಾನುದಾನಕ್ಕೆ ಒಳಪಡಿಸಲು ಬಾಕಿ ಇರುವ ಪ್ರಸ್ತಾವನೆಗಳನ್ನು ಪರಿಗಣಿಸಲು ತೀರ್ಮಾನಿಸಿ, ದಿನಾಂಕ::31/12/2015ರವರೆಗೆ ನಿವೃತ್ತಿ, ನಿಧನ, ರಾಜೀನಾಮೆ, ಇತ್ಯಾಧಿಗಳ ಕಾರಣಗಳಿಂದಾಗಿ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ತೆರವಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆಗಳನ್ನು ಮುಂದುವರೆಸಲು ಆರ್ಥಿಕ ಇಲಾಖೆಯು ಸಹಮತಿ ನೀಡಿರುತ್ತದೆ.

ಆರ್ಥಿಕ ಇಲಾಖೆಯು ನೀಡಿರುವ ಸಹಮತಿಯನ್ವಯ ಖಾಸಗಿ ಕಾನೂನು ಕಾಲೇಜುಗಳಲ್ಲಿ ದಿನಾಂಕ::31/12/2015ರವರೆಗೆ ನಿವೃತ್ತಿ, ನಿಧನ, ರಾಜೀನಾಮೆ, ಇತ್ಯಾದಿಗಳ ಕಾರಣಗಳಿಂದಾಗಿ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ತೆರವಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆಗಳ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಆಯುಕ್ತರಿಗೆ ನಿರ್ದೇಶನ ನೀಡಲಾಗಿರುತ್ತದೆ. ಇದರಂತೆ ಪ್ರಸ್ತಾವನೆಗಳು ಸರ್ಕಾರದಲ್ಲಿ ಸ್ವೀಕೃತಗೊಂಡ ನಂತರ ನಿಯಮಾನುಸಾರ ಕ್ರಮವಹಿಸಲಾಗುವುದು.

| | | |
|---|---|---|
| **ಊ)** | ಚಾಮರಾಜನಗರದಲ್ಲಿ ಸರ್ಕಾರಿ ಕಾನೂನು ಕಾಲೇಜನ್ನು ಪ್ರಾರಂಭಿಸಲಾಗಿದೆಯೇ; | 2019-20ನೇ ಶೈಕ್ಷಣಿಕ ಸಾಲಿನಿಂದ ಚಾಮರಾಜನಗರದಲ್ಲಿ ಸರ್ಕಾರಿ ಕಾನೂನು ಕಾಲೇಜನ್ನು ಪ್ರಾರಂಭಿಸಲಾಗಿದೆ. |
| **ಋ)** | ಹಾಗಾದಲ್ಲಿ, ಸದರಿ ಕಾಲೇಜಿಗೆ ಮಂಜೂರಾಗಿರುವ ಬೋಧಕ / ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು; ಸದರಿ ಸಾಲಿನಲ್ಲಿ ಎಷ್ಟು ಮಂದಿ ಪ್ರವೇಶ ಪಡೆದಿದ್ದಾರೆ? | ಸದರಿ ಕಾಲೇಜಿಗೆ ಒಟ್ಟು-13 ಬೋಧಕ ಹಾಗೂ 02-ಬೋಧಕೇತರ ಹುದ್ದೆಗಳು ಮಂಜೂರಾಗಿರುತ್ತದೆ.<br><br>ಸರ್ಕಾರಿ ಕಾನೂನು ಕಾಲೇಜು, ಚಾಮರಾಜನಗರ ಈ ಕಾಲೇಜಿನಲ್ಲಿ 2023-24ನೇ ಸಾಲಿಗೆ ವಿದ್ಯಾರ್ಥಿಗಳನ್ನು ಪ್ರವೇಶಾತಿ ಮಾಡಿಕೊಳ್ಳಲು ಮೂಲಭೂತ ಸೌಕರ್ಯಗಳು ಇಲ್ಲದ ಕಾರಣ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದಿಂದ ಸಂಯೋಜನಾ ಆದೇಶ ನೀಡಿರುವುದಿಲ್ಲ. ಆದುದರಿಂದ, ಈ ಸಾಲಿನಲ್ಲಿ ವಿದ್ಯಾರ್ಥಿಗಳಿಗೆ ಪ್ರವೇಶಾತಿ ನೀಡಿರುವುದಿಲ್ಲ. |

ಸಂಖ್ಯೆ: ಲಾ-ಹೆಚ್‌ಆರ್‌ಎಮ್/194/2023

**(ಎಚ್.ಕೆ. ಪಾಟೀಲ)**
ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು, ಶಾಸನ ರಚನೆ
ಹಾಗೂ ಪ್ರವಾಸೋದ್ಯಮ ಸಚಿವರು